# <u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ: ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಯೋಜನೆಯಡಿ 2017-18ನೇ ಸಾಲಿಗೆ ರಾಜ್ಯ ವಲಯದಡಿ ಸಮಸ್ಯಾತ್ಮಕ ಗ್ರಾಮೀಣ ಜನವಸತಿಗಳಲ್ಲಿ **C&Q WPP (Gen) ಘಟಕದಡಿ - ನೀರು ಶುದ್ಧೀಕರಣ ಘಟಕ**ಗಳನ್ನು ಇಲಾಖಾ ಟೆಂಡರ್ ಮುಖೇನ ಅಳವಡಿಸಲು ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ:
(1) ಸರ್ಕಾರದ ಆದೇಶ ಸಂ.FD 180 BRS 2017, ಬೆಂಗಳೂರು, ದಿನಾಂಕ 02.02.2018.
(2) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/82/ಗ್ರಾಕುನೀ&ನೈಇ/2017, ಬೆಂಗಳೂರು, ದಿನಾಂಕ 06-02-2018.
(3) ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ/08/ಗ್ರಾನೀಸ(8)/2018, ಬೆಂಗಳೂರು, ದಿನಾಂಕ:08.02.2018.

**<u>ಪೀಠಿಕೆ:</u>**

ಮೇಲೆ ಓದಲಾದ ಉಲ್ಲೇಖ (1) ರಲ್ಲಿ ಆರ್ಥಿಕ ಇಲಾಖೆಯು 2017-18ನೇ ಸಾಲಿಗೆ SCP & TSP ಅಡಿ ಗ್ರಾಮೀಣ ಕುಡಿಯುವ ನೀರು ಸರಬರಾಜು ಕಾಮಗಾರಿಗಳಿಗೆ ಪೂರಕ ಅಂದಾಜು-3 ರಲ್ಲಿ ಹೆಚ್ಚುವರಿಯಾಗಿ ಲೆಕ್ಕ ಶೀರ್ಷಿಕೆ 2215-01-102-9-08-422 ಎಸ್.ಸಿ.ಪಿ ಅಡಿ ರೂ.6456.00 ಲಕ್ಷಗಳನ್ನು ಮತ್ತು ಲೆಕ್ಕ ಶೀರ್ಷಿಕೆ 2215-01-102-9-08-423 ಟಿ.ಎಸ್.ಪಿ ಅಡಿ ರೂ.3038.00 ಲಕ್ಷಗಳನ್ನು ಒಟ್ಟು ರೂ.9494.00 ಲಕ್ಷಗಳನ್ನು ಹೆಚ್ಚುವರಿಯಾಗಿ ಮಂಜೂರು ಮಾಡಿದೆ.

ಉಲ್ಲೇಖ (2) ರಲ್ಲಿ 2017-18ನೇ ಸಾಲಿನಲ್ಲಿ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಯೋಜನೆ SCP & TSP ಅಡಿ ಹೆಚ್ಚುವರಿಯಾಗಿ ಲೆಕ್ಕ ಶೀರ್ಷಿಕೆ ಎಸ್.ಸಿ.ಪಿ. 2215-01-102-9-08-422 ಅಡಿ ರೂ.6456.00 ಲಕ್ಷಗಳು ಹಾಗೂ 2215-01-102-9-08-423 ಟಿ.ಎಸ್.ಪಿ. ಅಡಿ ರೂ.3038.00 ಒಟ್ಟು ಅನುದಾನ ರೂ.9494.00 ಲಕ್ಷಗಳನ್ನು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗೆ ಬಿಡುಗಡೆ ಗೊಳಿಸಿರುತ್ತದೆ.

ಮುಂದುವರೆದು, ಸದರಿ ಬಿಡುಗಡೆ ಗೊಳಿಸಿರುವ ರೂ. 9494.00 ಲಕ್ಷಗಳ ರಾಜ್ಯದ ಪಾಲಿನ ಹೆಚ್ಚುವರಿ ಅನುದಾನದಲ್ಲಿ ಪ್ರಸ್ತುತ ಗ್ರಾಮೀಣ ಕುಡಿಯುವ ನೀರು ಯೋಜನೆಯ C&Q -WPP(Gen) ಘಟಕದಡಿ **ಇಲಾಖಾವತಿಯಿಂದ ಟೆಂಡರ್‌ಗೊಂಡಿರುವ ಶುದ್ಧ ಕುಡಿಯುವ ನೀರಿನ ಘಟಕಗಳನ್ನು** (WPP) ಗುಲ್ಬರ್ಗಾ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದಲ್ಲಿ ಅನುಷ್ಠಾನಗೊಳಿಸಬೇಕಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅನುಷ್ಠಾನಗೊಳಿಸುವ ಸಲುವಾಗಿ ಒಟ್ಟು ರೂ.100.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲು ತೀರ್ಮಾನಿಸಲಾಗಿರುತ್ತದೆ. ಆದ್ದರಿಂದ, ಈ ಕೆಳಕಂಡ ಆದೇಶ.

## <u>ಸರ್ಕಾರದ ಆದೇಶ ಸಂ.ಗ್ರಾಅಪ/46/ಗ್ರಾಕುನೀ&ನೈಇ/2017, ಬೆಂಗಳೂರು, ದಿನಾಂಕ 26-03-2018</u>

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ 2017-18ನೇ ಸಾಲಿನಲ್ಲಿ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಯೋಜನೆಯಡಿ ರಾಜ್ಯ ವಲಯದ C&Q (GEN) ಘಟಕದಡಿ **ಇಲಾಖಾವತಿಯಿಂದ ಟೆಂಡರ್‌ಗೊಂಡಿರುವ** ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅನುಷ್ಠಾನಗೊಳಿಸುವ ಸಲುವಾಗಿ ಸಾಮಾನ್ಯ ಲೆಕ್ಕ ಶೀರ್ಷಿಕೆ 2215-01-102-9-08-132 ಅಡಿ ರೂ.100.00 ಲಕ್ಷಗಳ (**ರೂಪಾಯಿ ಒಂದು ಕೋಟಿಗಳು ಮಾತ್ರ**) ಅನುದಾನವನ್ನು ರಾಜ್ಯದ ಗುಲ್ಬರ್ಗಾ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಕ್ಕೆ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ರಾಜ್ಯ ಮಟ್ಟದಲ್ಲಿರುವ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ SWSM ನ ಮೂಲ ಉಳಿತಾಯ ಖಾತೆ ಸಂಖ್ಯೆ: 04462010091577 ಯಿಂದ ಸಂಬಂಧಪಟ್ಟ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಲೆಕ್ಕಾಧಿಕಾರಿಗಳ ಮೇಲುರುಜುವಿನೊಂದಿಗೆ ಆಯಾ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳು ಗ್ರಾಮೀಣ ಕುಡಿಯುವ ನೀರು ಯೋಜನೆಯ C&Q (Gen) - WPP ಯಡಿ ಕಳುಹಿಸುವ ಬಿಲ್ಲುಗಳನ್ನು ಈ ಆದೇಶದಲ್ಲಿ ಸಂಬಂಧಿಸಿದ ವಿಭಾಗವಾರು ಬಿಡುಗಡೆ ಮಾಡಿರುವ ಅನುದಾನದ ಮಿತಿಯೊಳಗೆ ಮಾನ್ಯ ಮಾಡಲು ಸಿಂಡಿಕೇಟ್ ಬ್ಯಾಂಕ್ – ರಾಜ್ಯ ಮಟ್ಟದಲ್ಲಿ ಕ್ರಮವಹಿಸತಕ್ಕದ್ದು. ಹಾಗೂ ಆಯಾ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳು

ಇಲಾಖಾ ಪಂಚತಂತ್ರದ ತಂತ್ರಾಂಶದಲ್ಲಿ (ಗಾಂಧಿ ಸಾಕ್ಷಿ ಕಾಯಕಲ್ಪ) ಹಾಗೂ IMIS ನಲ್ಲಿ ವೆಚ್ಚ ದಾಖಲಿಸಬೇಕು. ಇದನ್ನು ಜಿಲ್ಲಾ ಪಂಚಾಯತಿಗಳ ಮುಖ್ಯ ಲೆಕ್ಕಾಧಿಕಾರಿಗಳು ಪರಿವೀಕ್ಷಿಸಿ ದೃಢೀಕರಿಸಬೇಕು.

3. ಮುಖ್ಯ ಲೆಕ್ಕಾಧಿಕಾರಿಗಳು, ಗ್ರಾ.ಕು.ನೀ.&.ನೈ. ಇಲಾಖೆ ಪ್ರಸ್ತುತ ಬಿಡುಗಡೆ ಮಾಡುತ್ತಿರುವ ಅನುದಾನವನ್ನು IMIS ನಲ್ಲಿ ಇಂದೀಕರಿಸತಕ್ಕದ್ದು.

4. ಈ ಆದೇಶದಲ್ಲಿ C&Q – WPP ( GEN) ಅಡಿ ಬಿಡುಗಡೆಯಾದ ಅನುದಾನವನ್ನು ಲೆಕ್ಕ ಶೀರ್ಷಿಕೆ 2215-01-102-9-08-132 ಅಡಿ ಯಲ್ಲಿನ **ನೀರು ಶುದ್ಧೀಕರಣ ಘಟಕಗಳ ಅನುಷ್ಠಾನಕ್ಕೆ ಮಾತ್ರ** ವಿನಿಯೋಗಿಸತಕ್ಕದ್ದು. ಯಾವುದೇ ಕಾರಣಕ್ಕೂ ಬೇರೆ ಕಾಮಗಾರಿಗೆ ವಿನಿಯೋಗಿಸತಕ್ಕದ್ದಲ್ಲ.

5. ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನವನ್ನು ವಿನಿಯೋಗಿಸುವಾಗ ಕರ್ನಾಟಕ ಪಾರದರ್ಶಕ ಕಾಯ್ದೆ–1999 ಮತ್ತು ಕರ್ನಾಟಕ ಪಾರದರ್ಶಕ ನಿಯಮಗಳು–2000, ಕರ್ನಾಟಕ ಆರ್ಥಿಕ ಸಂಹಿತೆ–1958, ಕರ್ನಾಟಕ ಖಜಾನೆ ಸಂಹಿತೆ, ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, ಪಿಡಬ್ಲ್ಯುಡಿ "ಎ" ಕೋಡ್ ಮತ್ತು "ಡಿ" ಕೋಡ್ ಹಾಗೂ ಚಾಲ್ತಿ ಇರುವ ಇಲಾಖಾ ಇತರೆ ಸುತ್ತೋಲೆ, ಆದೇಶ ಹಾಗೂ ನಿಯಮಗಳು / ಕಾಯ್ದೆಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

6. ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನಕ್ಕೆದುರಾಗಿ ಮಾಡಿದ ವೆಚ್ಚದ ವಿವರ ಹಾಗೂ ಲೆಕ್ಕಪತ್ರಗಳನ್ನು ಸಂಬಂಧಿಸಿದ ಗ್ರಾಮೀಣ ಕುಡಿಯುವ ನೀರು ವಿಭಾಗದವರು ಜಿಲ್ಲಾ ಪಂಚಾಯತ್ ಮುಖಾಂತರ ಪ್ರತೀ ತಿಂಗಳು 10ನೇ ತಾರೀಖಿನೊಳಗಾಗಿ ಕೇಂದ್ರ ಕಛೇರಿಗೆ ಸಲ್ಲಿಸತಕ್ಕದ್ದು. ಹಾಗೂ ಸಂಬಂಧಿಸಿದ ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದವರು ಕೇಂದ್ರ ಸರ್ಕಾರದ IMIS ತಂತ್ರಾಂಶದಲ್ಲಿ ಆರ್ಥಿಕ ಮತ್ತು ಭೌತಿಕ ಪ್ರಗತಿಯನ್ನು C&Q –GEN ಅಡಿ ಇಂದೀಕರಿಸತಕ್ಕದ್ದು.

7. ಮುಖ್ಯ ಇಂಜಿನಿಯರ್, ಗ್ರಾ.ಕು.ನೀ.&.ನೈ. ಇಲಾಖೆ ಇವರು ಆಯಾಯ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳು IMIS ನಲ್ಲಿ ಇಂದೀಕರೀಸಿದ ಮಾಹಿತಿಯನ್ನು ಪರಿಶೀಲಿಸತಕ್ಕದ್ದು.

8. ಈ ಆದೇಶದಲ್ಲಿ ಬಿಡುಗಡೆ ಮಾಡಲಾದ ಅನುದಾನವನ್ನು ಯಾವುದೇ ಕಾರಣದಲ್ಲೂ ಇತರೆ ಘಟಕದಡಿ ವರ್ಗಾಯಿಸಿ ಉಪಯೋಗಿಸಿಕೊಳ್ಳದಂತೆ ಕ್ರಮ ವಹಿಸತಕ್ಕದ್ದು. ಲೆಕ್ಕಪರಿಶೋಧನೆಯ ಸಮಯದಲ್ಲಿ ಕಡ್ಡಾಯವಾಗಿ ಲೆಕ್ಕಪತ್ರಗಳನ್ನು ಹಾಜರಿಪಡಿಸುವುದು. ಕಾಮಗಾರಿಗಳ ಆರ್ಥಿಕ ಮತ್ತು ಭೌತಿಕ ಪ್ರಗತಿಯನ್ನು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮೇಲುಸ್ತುವಾರಿ ಮಾಡಿ ವರದಿ ಮಾಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಆಯುಕ್ತರು ಹಾಗೂ
ಸರ್ಕಾರದ ಪದನಿಮಿತ್ತ ಕಾರ್ಯದರ್ಶಿ,
ಗ್ರಾ. ಕು. ನೀ. &. ನೈ. ಇಲಾಖೆ, ಬೆಂಗಳೂರು.
21/03

**ಪ್ರತಿಯನ್ನು :**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು-1) ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮುಖ್ಯ ಇಂಜಿನಿಯರ್, ಗ್ರಾ.ಕು.ನೀ.&.ನೈ. ಇಲಾಖೆ, 1ನೇ ಮಹಡಿ, ಕೆ.ಹೆಚ್.ಬಿ. ಕಟ್ಟಡ, ಕಾವೇರಿಭವನ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
6. ಅಧ್ಯಕ್ಷರು, ಜಿಲ್ಲಾ ಪಂಚಾಯತ್, ರಾಜ್ಯದ 30 ಜಿಲ್ಲೆಗಳು.
7. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಗುಲ್ಬರ್ಗ ಜಿಲ್ಲೆ, ಇವರಿಗೆ ಕಳುಹಿಸುತ್ತಾ, ಆದೇಶದಲ್ಲಿನ ನಿಬಂಧನೆಗಳನ್ನು ಚಾಚೂ ತಪ್ಪದೆ ಪಾಲಿಸಲು ಸೂಚಿಸಿದೆ.
8. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&.ನೈ. ವೃತ್ತ, 4 ವೃತ್ತ ಕಛೇರಿಗಳು ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
9. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.

10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
11. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
12. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬೆಂಗಳೂರು.
13. ವಿಶೇಷಾಧಿಕಾರಿ (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
14. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
15. ಮುಖ್ಯ ಲೆಕ್ಕಾಧಿಕಾರಿಗಳು, RDW&SD ಕೇಂದ್ರ ಕಛೇರಿ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
16. ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ರಾಜ್ಯದ ಗುಲ್ಬರ್ಗ ಜಿಲ್ಲೆ ಇವರಿಗೆ ಕಳುಹಿಸುತ್ತಾ, ಆದೇಶದಲ್ಲಿನ ನಿಬಂಧನೆಗಳನ್ನು ಚಾಚೂ ತಪ್ಪದೆ ಪಾಲಿಸಲು ಸೂಚಿಸಿದೆ.
17. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ರಾಜ್ಯದ ಗುಲ್ಬರ್ಗ ವಿಭಾಗ ಕಛೇರಿ ಇವರಿಗೆ ಕಳುಹಿಸುತ್ತಾ, ಆದೇಶದಲ್ಲಿನ ನಿಬಂಧನೆಗಳನ್ನು ಚಾಚೂ ತಪ್ಪದೆ ಪಾಲಿಸಲು ಸೂಚಿಸಿದೆ.
18. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್), ಗ್ರಾ. ಅ. ಮತ್ತು ಪಂ. ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
19. ಆಯುಕ್ತರು, RDW&SD ಮತ್ತು ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ ಇವರ ಆಪ್ತ ಸಹಾಯಕರಿಗೆ.
20. ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, BWSSB ಶಾಖೆ, ರಾಜದೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು.
21. ಆಂತರಿಕ ಆರ್ಥಿಕ ಸಲಹೆಗಾರರು, RDPR ಇಲಾಖೆ ಇವರ ಆಪ್ತ ಸಹಾಯಕರು.
22. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾ.ಅ.ಪಂ.ರಾಜ್ ಇಲಾಖೆ, ಬೆಂಗಳೂರು.
23. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ.&.ಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
24. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
25. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).
26. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.